# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1659(1926)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥ್ ರಾವ್ ಮಲ್ಕಾಪುರೆ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ಹೊರ ಗುತ್ತಿಗೆ ಡಾಟಾ ಎಂಟ್ರಿ ಆಪರೇಟರ್‌ಗಳ ಕುರಿತು

(ಅ) 2010-11 ನೇ ಸಾಲಿನಿಂದ ರಾಜ್ಯದ ಆಹಾರ ಇಲಾಖೆಯಲ್ಲಿ ಇಲ್ಲಿಯವರೆಗೆ ಹೊರ ಗುತ್ತಿಗೆ ಆಧಾರದ ಮೇಲೆ ತಾಲ್ಲೂಕು ಕಛೇರಿಯಲ್ಲಿ ಹಾಗೂ ಅನೌಪಚಾರಿಕ ಪಡಿತರ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾಟಾ ಎಂಟ್ರಿ ಆಪರೇಟರ್‌ಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ಡಾಟಾ ಎಂಟ್ರಿ ಆಪರೇಟರ್‌ಗಳು ಎಷ್ಟು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿದ್ದಾರೆ; (ವಿವರ ನೀಡುವುದು )

(ಇ) 2010-11 ರಿಂದ ಇಲ್ಲಿಯವರೆಗೆ ಸದರಿ ತಾಲ್ಲೂಕು ಕಛೇರಿಯಲ್ಲಿ ಹಾಗೂ ಅನೌಪಚಾರಿಕ ಪಡಿತರ ಪ್ರದೇಶದ ಕಛೇರಿಯಲ್ಲಿ ಯಾವ ವರ್ಷದಿಂದ ಕೆಲಸ ನಿರ್ವಹಿಸುತ್ತಿದ್ದಾರೆ ಹಾಗೂ ಅವರ ಆದೇಶವನ್ನು ಯಾವ ವರ್ಷದವರೆಗೆ ಮುಂದುವರಿಸಲಾಗಿದೆ; (ನವೀಕರಿಸಿದ್ದಲ್ಲಿ ಆದೇಶದ ಪ್ರತಿಗಳು ಒದಗಿಸುವುದು )

(ಈ) 2019-20 ಹಾಗೂ 2020-21ನೇ ಸಾಲಿನವರೆಗೆ ತಾಲ್ಲೂಕು ಕಛೇರಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಸದರಿ ಡಾಟಾ ಎಂಟ್ರಿ ಆಪರೇಟರ್‌ಗಳ ಸೇವೆಯನ್ನು ಮುಂದುವರೆಸದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ವರ್ಷದಿಂದ ಅವರ ಆದೇಶವನ್ನು ಯಾವ ಕಾಲಮಿತಿಯೊಳಗೆ ಮುಂದುವರಿಸಲಾಗುವುದು? (ಮಾಹಿತಿ ನೀಡುವುದು)